# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಹೊಸದಾಗಿ ಮೇಲ್ದರ್ಜೆಗೇರಿಸಿರುವ ವಿಭಾಗೀಯ ಉಪ ನಿರ್ದೇಶಕರು (ದೈಹಿಕ ಶಿಕ್ಷಣ) ಹುದ್ದೆಯನ್ನು ಧಾರವಾಡ ಆಯುಕ್ತಾಲಯಕ್ಕೆ ಸ್ಥಳಾಂತರಿಸುವ ಬಗ್ಗೆ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ: ಇಡಿ 95 ಯೋಯೋಕಾ 2007, ದಿನಾಂಕ:30/08/2007.

**ಪ್ರಸ್ತಾವನೆ:-**

ವೈದ್ಯನಾಥನ್ ಸಮಿತಿ ಶಿಫಾರಸ್ಸುಗಳನ್ವಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಮತ್ತು ಯೋಗ ಶಿಕ್ಷಣವನ್ನು ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಮೇಲೆ ಓದಲಾದ ದಿನಾಂಕ:30/08/2007 ರ ಸರ್ಕಾರದ ಆದೇಶದಲ್ಲಿ ವಿಭಾಗೀಯ ದೈಹಿಕ ಶಿಕ್ಷಣ ಅಧೀಕ್ಷಕರು (ವೇತನ ಶ್ರೇಣಿ ರೂ.14050-25050) ಹುದ್ದೆಗಳನ್ನು ವಿಭಾಗೀಯ ಉಪ ನಿರ್ದೇಶಕರು (ದೈಹಿಕ ಶಿಕ್ಷಣ) (ವೇತನ ಶ್ರೇಣಿ ರೂ.18150-26925) ಹುದ್ದೆಗೆ ಮೇಲ್ದರ್ಜೆಗೇರಿಸಲಾಗಿದೆ. ಅದರನ್ವಯ ಸಹ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಳಗಾಂ ವಿಭಾಗ, ಬೆಳಗಾಂ ಇಲ್ಲಿಗೆ ಮಂಜೂರಾಗಿರುವ ವಿಭಾಗೀಯ ಉಪ ನಿರ್ದೇಶಕರು (ದೈಹಿಕ ಶಿಕ್ಷಣ) ಹುದ್ದೆಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ಧಾರವಾಡ ಆಯುಕ್ತಾಲಯದ ಕಛೇರಿಗೆ ಸ್ಥಳಾಂತರಿಸಲು ಸರ್ಕಾರ ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 08 ಡಿಪಿಐ 2010, ಬೆಂಗಳೂರು, ದಿನಾಂಕ:08/06/2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಸಹ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಳಗಾಂ ವಿಭಾಗ, ಬೆಳಗಾಂ ಇಲ್ಲಿಗೆ ಮಂಜೂರಾಗಿರುವ ವಿಭಾಗೀಯ ಉಪ ನಿರ್ದೇಶಕರು (ದೈಹಿಕ ಶಿಕ್ಷಣ) ಹುದ್ದೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಧಾರವಾಡ ಆಯುಕ್ತಾಲಯದ ಕಛೇರಿಗೆ ಸ್ಥಳಾಂತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಸ್.ಸೋಮಶೇಖರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಆಡಳಿತ)
8/6/10

**ಇವರಿಗೆ:-**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಗುಲ್ಬರ್ಗಾ.
4. ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ/ಬೆಳಗಾಂ ಜಿಲ್ಲೆ.
5. ನಿರ್ದೇಶಕರು (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಮುಖ್ಯ ಲೆಕ್ಕಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಉಪ ನಿರ್ದೇಶಕರು (ದೈಹಿಕ ಶಿಕ್ಷಣ ವಿಭಾಗ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.